<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>

<u>ಸಿಸಿ ಸಂಖ್ಯೆ: 833/2023</u>

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ–ನಿರೀಕ್ಷಕರು,
ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ಗುರುಸ್ವಾಮಿ ಮತ್ತು ಇತರರು

:: <u>ದೋಷಾರೋಪಣೆ</u> ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ–

1) ಶ್ರೀ.ಗುರುಸ್ವಾಮಿ ಬಿನ್ ಶಿವಣ್ಣನಾಯಕ,
ವಯಸ್ಸು ಸುಮಾರು 36 ವರ್ಷ,

2) ಶ್ರೀ.ಶಿವರಾಜನಾಯಕ ಬಿನ್ ಶಿವಣ್ಣನಾಯಕ,
ವಯಸ್ಸು ಸುಮಾರು 29 ವರ್ಷ,

3) ಶ್ರೀಮತಿ.ಕಮಲಮ್ಮ ಕೋಂ ಶಿವಣ್ಣನಾಯಕ,
ವಯಸ್ಸು ಸುಮಾರು 45 ವರ್ಷ,

ನಂಜನಗೂಡು ತಾಲ್ಲೂಕಿನ ಮಾದಾಪುರ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:–

ಮೊದಲನೆಯದಾಗಿ ದಿನಾಂಕ 28.05.2023 ರಂದು ಸಂಜೆ 06.00 ಗಂಟೆ ಸಮಯದಲ್ಲಿ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಮಾದಾಪುರ ಗ್ರಾಮದಲ್ಲಿರುವ ಚಾಸಾ–1–ಶ್ರೀಮತಿ.ಜ್ಯೋತಿರವರು ಅಂಗಡಿಯಲ್ಲಿ ವ್ಯಾಪಾರ ಮಾಡುತ್ತಿರುವಾಗ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಅಂಗಡಿ ಹತ್ತಿರ ಬಂದು ಏಕೆ ನಮ್ಮ ಜಮೀನನು ಉಳುಮೆ ಮಾಡಿದ್ದೀರಾ ಎಂದು ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ಮತ್ತು 2 ನೇ ಆರೋಪಿಗಳಾದ ನೀವು ಚಾಸಾ–1 ರವರನ್ನು ಉದ್ದೇಶಿಸಿ "ಎಲ್ಲಿ ನಿಮ್ಮ ಅಣ್ಣ ಸೂಳೆ ಮಗ" ಎಂದು ಅವಾಚ್ಯ ಶಬ್ಧಗಳಿಂದ ಬೈದಿದ್ದು, ಆ ಮೂಲಕ ಚಾಸಾ–1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು

ಕುಪಿತರಾಗಿ ಶಾಂತಿಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ಮತ್ತು 2 ನೇ ಆರೋಪಿಗಳಾದ ನೀವು ಚಾಸಾ-1 ರವರ ಮಾನಕ್ಕೆ ಕುಂದುಂಟು ಮಾಡುವ ಉದ್ದೇಶದಿಂದ ಚಾಸಾ-1 ರವರನ್ನು ಉದ್ದೇಶಿಸಿ "ಅಂಗಡಿಯಿಂದ ಹೊರಗೆ ಬಾ ಬಡ್ಡಿ" ಎಂದು ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 509 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ಮತ್ತು 2 ನೇ ಆರೋಪಿಗಳಾದ ನೀವು ಚಾಸಾ-1 ರವರನ್ನು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಕೈಯಿಂದ ಚಾಸಾ-1 ರವರ ಎಡ ಕಪಾಳಕ್ಕೆ ಮತ್ತು 2 ನೇ ಆರೋಪಿಯಾದ ನೀವು ಕೈಯಿಂದ ಚಾಸಾ-1 ರವರ ಮೈ-ಕೈಗೆ ಸ್ವ-ಇಚ್ಛೆಯಿಂದ ಹೊಡೆದು ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು,

ಆರೋಪಿಗಳ ಪೈಕಿ 3 ನೇಅ 1 ಚಾಸಾ-1 ರವರನ್ನು ಉದ್ದೇಶಿಸಿ "ನಿಮ್ಮನ್ನು ಬಿಡುವುದಿಲ್ಲ, ನೀವು ಜಮೀನಿನ ವಿಚಾರಕ್ಕೆ ಬಂದರೆ ನಿಮ್ಮನ್ನು ಕೊಲೆ ಮಾಡಿಸುತ್ತೇವೆ" ಎಂದು ಜೀವಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ರಿಂದ 3 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ರಿಂದ 3 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 06.08.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.